OS No. 61/2022

PW-5

**(ಇಂದು ದಿಃ 01-07-2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು)**

**<u>ಪಾಟೀ ಸವಾಲುಃ- 3ನೇ ಪ್ರತಿವಾದಿ ಪರ ಶ್ರೀ. ಆರ್ ಎಮ್ ವಕೀಲರಿಂದಃ-</u>**

1 ಮತ್ತು 2 ನೇ ಪ್ರತಿವಾದಿಯರು ಇಡಿಗಾ ಜಾತಿಯವರು ಎಂದರೆ ಸರಿ. ನಾನು ಎಸ್.ಸಿ. ಜನಾಂಗಕ್ಕೆ ಸೇರಿದವರು ಎಂದರೆ ಸರಿ. ನನ್ನ ಸರ್ವೆ ನಂಬರ 101. ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರದಲ್ಲಿ ವಾದಿಗೆ ಎಷ್ಟು ಆದಾಯ ಬರುತ್ತಿತ್ತು ಎಂದು ನಾನು ಹೇಳಿ ಬರೆಸಿಲ್ಲ, ವಾದಿ ಮುಂಬೈಗೆ ಯಾವ ವರ್ಷ ಹೊದರು ಎಂದು ಹೇಳಿ ಬರೆಸಿದ್ದೇನೆ. ಆತ ಎಷ್ಟು ವರ್ಷಗಳ ಹಿಂದೆ ಮುಂಬೈಗೆ ಹೋದ ಮತ್ತು ಅಲ್ಲಿ ಏನು ಮಾಡುತ್ತಿದ್ದ ಎಂದು ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರದಲ್ಲಿ ಹೇಳಿ ಬರೆಸಿಲ್ಲ ಎಂದರೆ ಸರಿಯಲ್ಲ, ವಾದಿ ವ್ಯವಸಾಯ ಮಾಡುತ್ತಿರಲಿಲ್ಲ, ಪಾಲುದಾರಿಕೆಯ ವೈನ್ ಶಾಪ್‌ನಿಂದ ವಾದಿಗೆ ಎಷ್ಟು ಆದಾಯ ಬರುತ್ತಿತ್ತು ನನಗೆ ಗೊತ್ತಿಲ್ಲ, ಒಟ್ಟು ಕುಟುಂಬದ ಆಸ್ತಿಗಳಿಂದ ಬಂದ ಆದಾಯದಿಂದ ದಾವಾ ಐಟಂ ನಂಬರ 2 ಮತ್ತು 4 ಅನ್ನು ಖರೀದಿ ಮಾಡಿದ್ದಾರೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ, ವಾದಿ ಜಮೀನು ಖರೀದಿಸಲು 2ನೇ ಪ್ರತಿವಾದಿಗೆ ಹಣ ಕೊಟ್ಟಿದ್ದರು ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ, ನಾನು ವಾದಿ ಮಾತು ಕೇಳಿಕೊಂಡು ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ,

2ನೇ ಪ್ರತಿವಾದಿ 3 ನೇ ಪ್ರತಿವಾದಿಗೆ ಜಮೀನು ಮಾರಾಟ ಮಾಡಿದ್ದಾರೆ ಎಂದರೆ ನನಗೆ ಗೊತ್ತಿಲ್ಲ, ಅದರಂತೆ 3ನೇ ಪ್ರತಿವಾದಿ ಮಾಲಿಕರಾಗಿ ಕಬ್ಜಾದಲ್ಲಿದ್ದಾರೆ ಎಂದರೆ ಸರಿಯಲ್ಲ, 3ನೇ ಪ್ರತಿವಾದಿ ಹೆಸರು ಪಹಣಿಯಲ್ಲಿ ಬರುತ್ತಿದ್ದೆ ಎಂದರೆ ಸರಿ.

**(3ನೇ ಪ್ರತಿವಾದಿ ಪರ ವಕೀಲರು ಶ್ರೀ ಎಮ್ ಎ ಜೆ ವಕೀಲರು ಮಾಡಿರುವ ಪಾಟೀ ಸವಾಲನ್ನು ಅಳವಡಿಸಿಕೊಳ್ಳಲು ಅನುಮತಿ ಕೋರಿದ್ದು ನೀಡಲಾಯಿತು.)**

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನಕ್ಕೆ ಬೆರಳ್ಚು ಮಾಡಿಸಲಾಯಿತು)

**ಓ.ಹೇ.ಕೇ. ಸರಿ ಇದೆ.**

**ಹಿರಿಯ ಸಿವಿಲ್ ನ್ಯಾಯಾಧೀಶರು,**
**ಸೇಡಂ.**